P.C.R No.:77/2026
P.W.: 01

ಈ ದಿನ ದಿ.19.05.2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

**<u>ಸಾಕ್ಷಿಯ ವಿಹಿತ/ಪ್ರಮಾಣೀಕೃತ ಹೇಳಿಕೆಃ-</u>**

ನಾನು ಪಿರ್ಯಾದುದಾರರನಾಗಿದ್ದು, ನನ್ನ ಪ್ರಮಾಣ ಪೂರ್ವಕ ಹೇಳಿಕೆಯ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿರುವ ಎಲ್ಲಾ ವಿಷಯಗಳನ್ನು ನಾನೇ ಸ್ವತಃ ವಕೀಲರಿಗೆ ಹೇಳಿ ಬರೆಯಿಸಿ, ಓದಿಸಿ ತಿಳಿದುಕೊಂಡು ಮನಗೊಂಡ ನಂತರ ಸಹಿ ಮಾಡಿರುತ್ತೇನೆ. ನನ್ನ ಪ್ರಮಾಣ ಪತ್ರದಲ್ಲಿರುವ ಎಲ್ಲಾ ವಿಷಯಗಳು ನಿಜ ಮತ್ತು ಸತ್ಯ ಸಂಗತಿಗಳಾಗಿರುತ್ತವೆ.

ನಾನು ನನ್ನ ಪಿರ್ಯಾದಿಯ ಜೊತೆಗೆ ಚೆಕ್ಕಿನ ಮೂಲ ಪ್ರತಿಯನ್ನು ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ-1 ಎಂದು ಗುರುತಿಸಲಾಯಿತು. ಚೆಕ್ಕಿನಲ್ಲಿರುವ ಆರೋಪಿಯ ಸಹಿಯನ್ನು ಸಾಕ್ಷಿಯು ನೋಡಿ ಗುರುತಿಸಿರುತ್ತಾರೆ. ನಿಪಿ-1 ರಲ್ಲಿ ಸಾಕ್ಷಿಯು ಗುರುತಿಸಿದ ಆರೋಪಿಯ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು.

ದಿನಾಂಕಃ 18.02.2026 ರಂದು ಎಸ್.ಬಿ.ಐ ಬ್ಯಾಂಕ್ ಹಾರೋಹಳ್ಳಿ ಶಾಖೆ ರವರು ನೀಡಿರುವ ಒಂದು ಹಿಂಬರಹವನ್ನು ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ-2 ಎಂದು ಗುರುತಿಸಲಾಯಿತು.

ಆರೋಪಿಗೆ ನೀಡಿದ ನೋಟಿಸ್ಸಿನ ಕಛೇರಿ ಪ್ರತಿಯನ್ನು ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ-3 ಎಂದು ಗುರುತಿಸಲಾಯಿತು. ನಿಪಿ-3 ಕ್ಕೆ ಸಂಬಂಧಿಸಿದಂತೆ ಒಂದು ಅಂಚೆ ರಸೀದಿಯನ್ನು ಮತ್ತು ಒಂದು ಅಂಚೆ ಸ್ವೀಕೃತಿ ಪತ್ರವನ್ನು ಹಾಜರುಪಡಿಸಿದ್ದೇನೆ. ಅವುಗಳನ್ನು ಕ್ರಮವಾಗಿ ನಿಪಿ-4 ಮತ್ತು ನಿಪಿ-5 ಎಂದು ಗುರುತಿಸಲಾಯಿತು.

ನಿಪಿ-3 ಆರೋಪಿಗೆ ತಲುಪಿದ ಬಗ್ಗೆ ಅಂಚೆ ಇಲಾಖೆಯವರು ನೀಡಿದ ಟ್ರಾಕ್ ಕಂನ್ಸೈನ್‌ಮೆಂಟ್ ನ ವರದಿಯನ್ನು ಹಾಜರುಪಡಿಸಿದ್ದೇನೆ ಅದನ್ನು ನಿಪಿ-6 ಎಂದು ಗುರುತಿಸಲಾಯಿತು.

ಆದ್ದರಿಂದ ಆರೋಪಿ ವಿರುದ್ದ ಕಾನೂನು ರೀತಿಯ ಕ್ರಮ ಜರುಗಿಸಬೇಕಾಗಿ ಪ್ರಾರ್ಥನೆ.

(ಸಾಕ್ಷಿಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಖ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು).

**ಓ ಹೇ ಕೇ ಸರಿ ಇದೆ,**

**(ರಾಧ.ಎಸ್)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ.ಎಫ್.ಸಿ, ಕನಕಪುರ.**